# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ (ಹೊಸ ವಾರ್ಡ್ ಸಂಖ್ಯೆ.99) ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 17-02-2023 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀಮತಿ ಶಾಂತ.ಬಿ. ಅಧ್ಯಕ್ಷರು. ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು.
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ. ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು.
3. ಶ್ರೀಮತಿ ವಿನುತ. ಸದಸ್ಯರು.
4. ಶ್ರೀಮತಿ ಸರಸ್ವತಿ. ಸದಸ್ಯರು. ಜಲವಾಯು ವಿಹಾರ್ ಅಸೋಸಿಯೇಷನ್(ರಿ)
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು. ರಾಮಯ್ಯ ಬಡಾವಣೆ ನಿವಾಸಿಗಳ ಸಂಘ).

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರವಿ. ಕಂದಾಯ ನಿರೀಕ್ಷಕರು.
2. ಶ್ರೀ ಹನುಮಂತಪ್ಪ. ಹಿರಿಯ ಆರೋಗ್ಯ ನಿರೀಕ್ಷಕರು.
3. ಶ್ರೀ ಅಮಿತ್. ಸಹಾಯಕ ಅಭಿಯಂತರರು. ಬೀದಿ ದೀಪಗಳ ವಿಭಾಗ.
4. ಮಾರ್ಷಲ್. ವಾರ್ಡ್ ಸಂಖ್ಯೆ.29. ಕಾಚರಕನಹಳ್ಳಿ.
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ.
6. ಶ್ರೀ ರಾಜಶೇಖರ್. ಕಂದಾಯ ನಿರೀಕ್ಷಕರು.
7. ಶ್ರೀಮತಿ ರಾಜೇಶ್ವರಿ. ಕಲ್ಯಾಣ ಇಲಾಖೆ.
8. ಸಂಗೀತಾ. ಸಹಾಯಕ ಅಭಿಯಂತರರು. ಬಿಡಬ್ಲ್ಯೂ.ಎಸ್.ಎಸ್.ಬಿ
9. ಶ್ರೀ ಪುಟ್ಟಸ್ವಾಮಿ. ಕಿರಿಯ/ಸಹಾಯಕ ಅಭಿಯಂತರರು. ಬೆಸ್ಕಾಂ ಇಲಾಖೆ.

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಘನತ್ಯಾಜ್ಯ ನಿರ್ವಹಣೆ:**- ಯಾವುದೇ ಸಮಸ್ಯೆ ಇರುವುದಿಲ್ಲ.

2) **ಬೀದಿ ದೀಪಗಳ ನಿರ್ವಹಣೆ:**- ಯಾವುದೇ ಸಮಸ್ಯೆ ಇರುವುದಿಲ್ಲ.

3) **ಬೃಹತ್ ನೀರುಗಾಲುವೆ:**- ಯಾವುದೇ ಸಮಸ್ಯೆ ಇರುವುದಿಲ್ಲ.

4) **ಆರೋಗ್ಯ ಇಲಾಖೆ:**- ಯಾವುದೇ ಸಮಸ್ಯೆ ಇರುವುದಿಲ್ಲ.

5) **ಕಾಮಗಾರಿ ಇಲಾಖೆ:-**

- ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ):- ಪ್ರಸ್ತುತ ವಾರ್ಡ್ ಪ್ರದೇಶದಲ್ಲಿರುವ ಎಲ್ಲಾ ರಸ್ತೆಗಳ ರಸ್ತೆಗುಂಡಿಗಳನ್ನು ಮುಚ್ಚಿ, ರಸ್ತೆಗಳನ್ನು ರಸ್ತೆ ಹಾಗೂ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟಿರುತ್ತಾರೆ ಎಂದು ಹಾಗೂ ಎರಡು ರಸ್ತೆಗಳ

ಚರಂಡಿಗಳಲ್ಲಿ ಹೂಳು ತುಂಬಿದ್ದು, ಹೂಳು ತೆಗೆಯಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ, ಅಭಿಯಂತರರು ಹೂಳು ತೆಗೆಯುವ ಕಾಮಗಾರಿಯನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

6) **ಕಂದಾಯ ಇಲಾಖೆ:-**

- **ಕಂದಾಯ ನಿರೀಕ್ಷಕರು, ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಮತದಾರರ ಪಟ್ಟಿಯನ್ನು ಸಾರ್ವಜನಿಕರಿಗಾಗಿ ಪ್ರಚುರ ಪಡಿಸಲಾಗಿದ್ದು, ಹೊಸದಾಗಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಲು ಅವಕಾಶ ನೀಡಲಾಗಿದ್ದು, ಸಾರ್ವಜನಿಕರು ಆನ್‌ಲೈನ್ ಮುಖಾಂತರ ನೊಂದಣಿ ಮಾಡಬಹುದಾಗಿರುತ್ತದೆ ಎಂದು ಹಾಗೂ ಮತದಾರರ ಗುರುತಿನ ಚೀಟಿಯ ವಿಳಾಸವನ್ನು ಬದಲಾಯಿಸಲು ಅಥವಾ ಹೊಸದಾಗಿ ಪಡೆಯಲು ಅವಕಾಶವಿರುವುದಾಗಿ ಸಭೆಗೆ ತಿಳಿಸಿದರು.

7) **ಉದ್ಯಾನವನಗಳ ವಿಭಾಗ:-**

- **ಮಾನ್ಯ ಅಧ್ಯಕ್ಷರು ಮಾತನಾಡಿ:-** ಬಿಬಿಎಂಪಿ ಅರಣ್ಯ ವಿಭಾಗದ ಅಧಿಕಾರಿಗಳು ಹಾಗೂ ಉದ್ಯಾನವನಗಳ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಗಳಿಗೆ ಆಹ್ವಾನ ನೀಡಿದರೂ ಸಹ ನಿರಂತರವಾಗಿ ಗೈರು ಹಾಜರಾಗುತ್ತಿದ್ದು, ಅನೇಕ ಅರಣ್ಯ ವಿಭಾಗಕ್ಕೆ ಸಂಬಂಧಿಸಿದ ಹಾಗೂ ಉದ್ಯಾನವನಗಳಿಗೆ ಸಂಬಂಧಿಸಿದ ವಿಷಯಗಳು ವಾರ್ಡ್ ಸಮಿತಿ ಸಭೆಗಳಲ್ಲಿ ಪ್ರಸ್ತಾಪವಾಗುತ್ತಿದ್ದು, ಇದನ್ನು ಚರ್ಚಿಸಲು ಸಾಧ್ಯವಾಗದೇ ಸಾರ್ವಜನಿಕರು ಹಾಗೂ ಸದಸ್ಯರು ಸದರಿಯವರ ಗೈರು ಹಾಜರಿಯ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿರುತ್ತಾರೆ. ಆದ್ದರಿಂದ ಇವರುಗಳ ಮೇಲಾಧಿಕಾರಿಗಳಿಗೆ ಪತ್ರ ಬರೆಯಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಿ, ಮತ್ತೊಮ್ಮೆ ಆದೇಶಿಸಲಾಯಿತು.

8) **ಅರಣ್ಯ ವಿಭಾಗ:-**

- **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ):-** ರಾಮಯ್ಯ ಬಡಾವಣೆ ಹಾಗೂ ಬಿಡಿಎ ಬಡಾವಣೆಯಲ್ಲಿ ಹಲವು ಕಡೆಗಳಲ್ಲಿ ಮರಗಳನ್ನು ಟ್ರಿಮ್ ಮಾಡಬೇಕಾಗಿರುತ್ತದೆ, ಅವುಗಳನ್ನು ಕೂಡಲೇ ಕತ್ತರಿಸಲು ಪ್ರತಿ ವಾರ್ಡ್ ಸಮಿತಿ ಸಭೆಗಳಲ್ಲಿ ಪ್ರಸ್ತಾಪ ಮಾಡಲಾಗುತ್ತಿದ್ದು ಈವರೆವಿಗೂ ಯಾವುದೇ ಕ್ರಮ ವಹಿಸಿರುವುದಿಲ್ಲವೆಂದು ಮತ್ತೊಮ್ಮೆ ಸಭೆಗೆ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಅಧ್ಯಕ್ಷರು ಕೂಡಲೇ ಮೇಲಾಧಿಕಾರಿಗಳಿಗೆ ಪತ್ರ ಬರೆಯಲು ಆದೇಶಿಸಿದರು.

9) **ಪಶುಸಂಗೋಪನೆ ವಿಭಾಗ:-** ಯಾವುದೇ ಸಮಸ್ಯೆ ಇರುವುದಿಲ್ಲ.

10) **ನೀರು ಸರಬರಾಜು:-**

- **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ):-** ರವರು ಮಾತನಾಡಿ ನೆಹರು ರಸ್ತೆ, ಉಡುಪಿ ಹೋಟೆಲ್ ಸುತ್ತಮುತ್ತ ರಸ್ತೆಗಳಲ್ಲಿ ಬಿಡಬ್ಲ್ಯೂ.ಎಸ್.ಎಸ್.ಬಿ ರವರು ರಸ್ತೆಗಳಲ್ಲಿ ಆಳವಾಗಿ ಕತ್ತರಿಸಿದ್ದು, ಇದನ್ನು ಪುನರ್ ನಿರ್ಮಿಸಿರುವುದಿಲ್ಲ, ಇದರಿಂದ

ಸಾರ್ವಜನಿಕ ಹಾಗೂ ವಾಹನ ಸಂಚಾರಕ್ಕೆ ಅಡಚಣೆ ಆಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ, ಬಿಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರು ಕೂಡಲೇ ಕ್ರಮ ವಹಿಸಿ, ಸಾರ್ವಜನಿಕರ ಓಡಾಟಕ್ಕೆ ಅನುವು ಮಾಡಿಕೊಡಲಾಗುವುದೆಂದು ಸಭೆಗೆ ತಿಳಿಸಿದರು.

11) **ಪೊಲೀಸ್ (ಸಂಚಾರ):-** ಯಾವುದೇ ಸಮಸ್ಯೆ ಇರುವುದಿಲ್ಲ.

12) **ಬೆಸ್ಕಾಂ ಇಲಾಖೆ :-** ಯಾವುದೇ ಸಮಸ್ಯೆ ಇರುವುದಿಲ್ಲ.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29/99, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29/99, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.